# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| | | |
|---|---|---|
| ಭಾಗ–೪ಎ<br>Part – IVA | ಬೆಂಗಳೂರು, ಮಂಗಳವಾರ, ೧೬, ಡಿಸೆಂಬರ್,೨೦೨೫ ( ಮಾರ್ಗಶಿರಾ,೨೫, ಶಕವರ್ಷ, ೧೯೪೭)<br>BENGALURU, TUESDAY, 16, DECEMBER, 2025 (MARGASHIRA, 25, SHAKAVARSHA, 1947) | ನಂ.೮೧೭<br>No. 817 |


**ಕರ್ನಾಟಕ ವಿಧಾನಸಭೆ**

**ಹದಿನಾರನೇ ವಿಧಾನಸಭೆ**

**ಎಂಟನೇ ಅಧಿವೇಶನ**

## ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–86)**

ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂ. 45)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 13ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂ. 45)ರ 13ನೇ ಪ್ರಕರಣದ (1)ನೇ ಉಪ-ಪ್ರಕರಣದಲ್ಲಿ "ಒಂದು ಸಾವಿರ ರೂಪಾಯಿಗಳಿಗೆ ಹೆಚ್ಚಿರದಂಥ" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ವಾಹನಗಳನ್ನು ನೋಂದಣಿ ಮಾಡುವ ಸಮಯದಲ್ಲಿ ಒಂದು ಬಾರಿಯ ಸೆಸ್ ಅನ್ನು ಹೆಚ್ಚಿನ ಮಿತಿಯಲ್ಲಿ ವಿಧಿಸುವುದನ್ನು ಮತ್ತು ಸಂಗ್ರಹಿಸುವುದನ್ನು ಬಿಟ್ಟುಬಿಡುವುದಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂ. 45)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

**ರಾಮಲಿಂಗಾ ರೆಡ್ಡಿ**
ಸಾರಿಗೆ ಮತ್ತು ಮುಜರಾಯಿ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## ಅನುಬಂಧ
## ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ಅಧಿನಿಯಮ, 2017 (2017ರ ಕರ್ನಾಟಕ ಅಧಿನಿಯಮ ಸಂ. 45)ರ ಉದ್ಧೃತ ಭಾಗ

**XXX XXX XXX**

**13. ಉಪಕರವನ್ನು ವಿಧಿಸುವುದು ಮತ್ತು ಸಂಗ್ರಹಿಸುವುದು.-** (1) ವಾಹನ ನೋಂದಣಿ ಸಮಯದಲ್ಲಿ ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದ ಅಂಥ ದರದಲ್ಲಿ, ಒಂದು ಸಾವಿರ ರೂಪಾಯಿಗಳಿಗೆ ಹೆಚ್ಚಿರದಂಥ ಏಕಕಾಲಿಕ ಉಪಕರವನ್ನು ವಿಧಿಸತಕ್ಕದ್ದು ಮತ್ತು ಸಂಗ್ರಹಿಸತಕ್ಕದ್ದು. ಬೇರೆ ಬೇರೆ ವರ್ಗದ ಮೋಟಾರು ವಾಹನಗಳಿಗಾಗಿ ಬೇರೆ ಬೇರೆ ದರಗಳನ್ನು ವಿಧಿಸಬಹುದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಅಧಿಸೂಚನೆಯನ್ನು ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

(3) ನೋಂದಣಿ ಪ್ರಾಧಿಕಾರವು, ನೋಂದಣಿ ಸಮಯದಲ್ಲಿ ಹಾಗೆ ವಿಧಿಸಿದ ಉಪಕರವನ್ನು ಸಂಗ್ರಹಿಸತಕ್ಕದ್ದು ಮತ್ತು ನಿಯಮಿಸಬಹುದಾದ ಅಂಥ ರೀತಿಯಲ್ಲಿ ಅದನ್ನು ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ನಿಧಿಗೆ ಇರಸಾಲು (ಡಿemiಐ) ಮಾಡತಕ್ಕದ್ದು.

**XXX XXX XXX**

**KARNATAKA LEGISLATIVE ASSEMBLY**

**SIXTEENTH LEGISLATIVE ASSEMBLY**

**EIGHTH SESSION**

# THE KARNATAKA STATE ROAD SAFETY AUTHORITY (AMENDMENT) BILL, 2025

## (LA Bill No. 86 of 2025)

A Bill further to amend the Karnataka State Road Safety Authority Act, 2017.

Whereas it is expedient further to amend the Karnataka State Road Safety Authority Act, 2017 (Karnataka Act No. 45 of 2017) for the purpose hereinafter appearing:

Be it enacted by the Karnataka State Legislature in the Seventy Sixthyear of the Republic of India as follows :-

**1. Short title and commencement.-**(1)This Act may be called the Karnataka State Road Safety Authority (Amendment) Act, 2025.

(2) It shall come into force at once.

**2. Amendment of section 13.-**In the Karnataka State Road Safety Authority Act, 2017(Karnataka Act No. 45 of 2017), in section 13,in sub-section (1),the words “not more than one thousand rupees”, shall be omitted.

## STATEMENT OF OBJECTS AND REASONS

It is considered necessary further to amend the Karnataka State Road Safety Authority Act, 2017 (Karnataka Act No. 45 of 2017) to omit the upper limit in levy and collection of one time cess at the time of vehicles registration.

Hence, the Bill.

## FINANCIAL MEMORANDUM

There is no extra expenditure involved in the proposed legislative measure.

**RAMALINGA REDDY**
Minister for Transport
and Muzrai

**M.K. VISHALAKSHI**
Secretary
Karnataka Legislative Assembly

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



# ANNEXURE

## Extract of the Karnataka State Road Safety Authority Act, 2017

## (Karnataka Act No. 45 of 2017)

**XXX** **XXX** **XXX**

**13. Levy and collection of cess.-** (1) There shall be levied and collected onetime CESS at the time of vehicle registration, at such rate not more than onethousand rupees, as may be notified, by the State Government. Different rates maybe levied for different class of motor vehicles.

(2) Every notification issued under sub section (1) shall be laid before eachhouse of the State Legislature.

(3) The registration Authority shall at the time of registration collect the cessso levied and remit the same to the Karnataka Road Safety fund, in such manneras may be prescribed.

**XXX** **XXX** **XXX**

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH